# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-570 005

ವಿಷಯ: 2014-15ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ:1.ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಆಯ್ಕೆಯ ಸಂಬಂಧ ದಿನಾಂಕ 20-06-14ರಂದು ನಡೆದ ಸಭೆಯ ನಡಾವಳಿ.

2. ವಿಶ್ವವಿದ್ಯಾನಿಲಯದ ಆದೇಶ ಸಂಖ್ಯೆ: ಇಟಿ.11/152/2013-14 ದಿನಾಂಕ 24-06-14.

**ಆದೇಶ ಸಂಖ್ಯೆ: ಇಟಿ7/201/2011-12 ದಿನಾಂಕ 05ನೇ ಸೆಪ್ಟಂಬರ್, 2014(2)**

ದಿನಾಂಕ 20-06-2014ರಂದು ನಡೆದ ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಆಯ್ಕೆ ಸಮಿತಿ ಸಭೆಯ ನಿರ್ಣಯ ಹಾಗೂ ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, 2014-15ನೇ ಶೈಕ್ಷಣಿಕ ಸಾಲಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿನ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಬೋಧನಾ ಕಾರ್ಯ ನಿರ್ವಹಿಸಲು ಈ ಕೆಳಗಿನಂತೆ ಅತಿಥಿ ಉಪನ್ಯಾಸಕರಾಗಿ ಆಹ್ವಾನಿಸಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ವಾರಕ್ಕೆ ಒಟ್ಟು ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯ (ಗಂಟೆಗಳಲ್ಲಿ) * | ಸ್ನಾತಕೋತ್ತರ ವಿಭಾಗ / ಸ್ನಾತಕೋತ್ತರ ಕೇಂದ್ರ / ಘಟಕ ಕಾಲೇಜು | ಮಾಹೆಯಾನ ಸಂಭಾವನೆ ರೂ.ಗಳಲ್ಲಿ |
|---|---|---|---|---|
| ಡಾ.ಎನ್.ಸಿ.ಸುಮತಿ, ಬಿನ್ ಚಿಕ್ಕಚಲುವೇಗೌಡ, ನೆಲಮನೆ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ -571435 | ರಾಜ್ಯಶಾಸ್ತ್ರ / ಸಾರ್ವಜನಿಕ ಆಡಳಿತ | 12 ಗಂಟೆ | ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು. | 22500/- |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಿಸಿದ ಅಧ್ಯಯನದ ವಿಭಾಗದ ಅಧ್ಯಕ್ಷರು ಹಂಚಿಕೆ ಮಾಡುವರು. ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.

ಆಹ್ವಾನಿತ ಅತಿಥಿ ಉಪನ್ಯಾಸಕರು ಈ ಆದೇಶ ನೀಡಿದ 7 ದಿನಗಳೊಳಗೆ ಸಂಬಂಧಪಟ್ಟ ಅಧ್ಯಯನ ವಿಭಾಗಾಧ್ಯಕ್ಷರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶವು ರದ್ದಾಗುತ್ತದೆ.

**ಷರತ್ತುಗಳು:**

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಅಧ್ಯಯನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಶಾಶಿಇ/44/ಅಉನೇ/2012-13ನೇ ಪಾವಿ-I, ದಿನಾಂಕ 02-07-2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿನ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾಗವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

ಪು.ತಿ.ನೋ.